# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 290(327)**
**ಸದಸ್ಯರ ಹೆಸರು : ಶ್ರೀ ಬಸವನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು)**
**ಉತ್ತರಿಸುವ ದಿನಾಂಕ : 10.03.2025**
**ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಸಚಿವರು.**

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಅಲ್ಪಸಂಖ್ಯಾತರ ಕಲ್ಯಾಣ ಸಂಸ್ಥೆಗಳು ಹಾಗೂ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿ ಅತಿಥಿ ಶಿಕ್ಷಕರಿಗೂ ಹಾಗೂ ರಾಜ್ಯ ಸರ್ಕಾರ ನಡೆಸುವ ಸರ್ಕಾರಿ ಶಾಲೆಗಳಲ್ಲಿನ ಅತಿಥಿ ಶಿಕ್ಷಕರಿಗೂ ನೀಡಲಾಗುತ್ತಿರುವ ವೇತನದಲ್ಲಿನ ತಾರತಮ್ಯವು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ, |
| ಆ | ಬಂದಿದ್ದರೆ, ಈ ವೇತನ ತಾರತಮ್ಯವನ್ನು ಸರಿಪಡಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ?(ವಿವರ ಒದಗಿಸುವುದು) | ಸರ್ಕಾರದ ಆದೇಶ ಸಂಖ್ಯೆ:ಸಕಇ 339 ಎಂಡಿಎಸ್ 2020, ದಿನಾಂಕ:20.02.2023ರಲ್ಲಿ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಇವರು ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳ ಕಾರ್ಯ ನಿರ್ವಹಣೆ ಮತ್ತು ಅವಧಿ ಶಿಕ್ಷಣ ಇಲಾಖೆಗಿಂತ ಭಿನ್ನವಾಗಿದೆ. ಶಿಕ್ಷಣ ಇಲಾಖೆಯ ಪ್ರೌಢ ಶಾಲೆಗಳಲ್ಲಿ ಬಹುತೇಕ 2/3 ವಿಭಾಗಗಳಿರುತ್ತವೆ. ಆದರೆ, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳಲ್ಲಿ 6ನೇ ತರಗತಿಯಿಂದ 10ನೇ ತರಗತಿಯ ವರೆಗೆ 5 ವಿಭಾಗಗಳಿದ್ದು ಆಂಗ್ಲ ಮಾಧ್ಯಮದಲ್ಲಿ ನಿರ್ವಹಿಸಲ್ಪಡುತ್ತಿವೆ. ವಿಷಯವಾರು ಶಿಕ್ಷಕರು ಪ್ರತಿದಿನ ಕನಿಷ್ಟ 5 ಬೋಧನಾ ಅವಧಿಗಳನ್ನು ಆಯಾ ವಿಷಯದಲ್ಲಿ ನಿರ್ವಹಿಸುವ ಅನಿವಾರ್ಯತೆ ಇದೆ. ಇದರ ಜೊತೆಗೆ ವಸತಿ ಶಾಲೆಗಳಲ್ಲಿ ಶಾಲಾ ಅವಧಿಯ ನಂತರವು ವಿದ್ಯಾರ್ಥಿಗಳಿಗೆ ವಿದ್ಯಾರ್ಥಿಗಳ ಅಧ್ಯಯನದ ಉಸ್ತುವಾರಿ, ಮೆಂಟರಿಂಗ್ ವ್ಯವಸ್ಥೆ, ಮಾಸ್ಟರ್ ಆನ್ ಡ್ಯೂಟಿ (MOD), ವಿಶೇಷ ಬೋಧನಾ ಅವಧಿಗಳು ಹಾಗೂ ಪರಿಹಾರ ಬೋಧನಾ ಅವಧಿ ಇತ್ಯಾದಿ ಅವಧಿಯ ನಂತರ ಹೆಚ್ಚುವರಿಯಾಗಿ ಕಾರ್ಯನಿರ್ವಹಿಸುವ ಅನಿವಾರ್ಯತೆ ಇರುತ್ತದೆ ಈ ಹಿನ್ನೆಲೆಯಲ್ಲಿ ವಸತಿ ಶಾಲೆಗಳಿಗೆ ಗೌರವಧನ ಮೊತ್ತ ರೂ.10,500/-, ಮಾಸ್ಟರ್ ಆನ್ ಡ್ಯೂಟಿ (MOD) ಭತ್ಯೆ ರೂ.3150/- ಹಾಗೂ ಪ್ರಯಾಣ ವೆಚ್ಚ ರೂ.3000/- ಸೇರಿದಂತೆ ಒಟ್ಟು ರೂ.16,650/- ಗಳನ್ನು ನೀಡಲಾಗುತ್ತಿದೆ. |

| | | |
|---|---|---|
| | | ರಾಜ್ಯದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳಿಗೆದುರಾಗಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ನೇಮಕ ಮಾಡಲಾಗುತ್ತಿರುವ ಪ್ರಾಥಮಿಕ ಶಾಲಾ ಅತಿಥಿ ಶಿಕ್ಷಕರಿಗೆ ರೂ.10,000/- ಗೌರವ ಸಂಭಾವನೆ ಹಾಗೂ ಪ್ರೌಢಶಾಲಾ ಅತಿಥಿ ಶಿಕ್ಷಕರಿಗೆ ರೂ.10,500/-ಗೌರವ ಸಂಭಾವನೆಯನ್ನು ನೀಡಲಾಗುತ್ತಿದೆ.<br>ಪ್ರಾಥಮಿಕ ಶಾಲಾ ಅತಿಥಿ ಶಿಕ್ಷಕರಿಗೆ ರೂ.15,000/- ಗೌರವ ಸಂಭಾವನೆ ಹಾಗೂ ಪ್ರೌಢಶಾಲಾ ಅತಿಥಿ ಶಿಕ್ಷಕರಿಗೆ ರೂ.16,000/- ಗೌರವ ಸಂಭಾವನೆಯನ್ನು ಪರಿಷ್ಕರಿಸಲು ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗಿತ್ತು. ಆದರೆ ಆರ್ಥಿಕ ಇಲಾಖೆಯು ಅತಿಥಿ ಶಿಕ್ಷಕರ ಗೌರವ ಸಂಭಾವನೆಯನ್ನು 2022ರಲ್ಲಿ ಪರಿಷ್ಕರಣೆ ಮಾಡಿರುವುದರಿಂದ ಮತ್ತೊಮ್ಮೆ ಪರಿಷ್ಕರಿಸಲು ಸಾಧ್ಯವಿಲ್ಲವೆಂದು ತಿಳಿಸಿರುತ್ತದೆ. |

**ಇಪಿ 69 ಎಸ್‌ಇಎಸ್ 2025**

**(ಎಸ್ ಮಧುಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ**
**ಇಲಾಖಾ ಸಚಿವರು**